ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

33

ಇಲಾಖೆ / ವಿಷಯ : DEPARTMENT / SUBJECT: ಗೃಹ, [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 10/3/2021

# ಷಡ್ಯಂತ್ರ ಮಾಡಿದವರ ಜೈಲಿಗೆ ಕಳುಹಿಸುವೆ

10/3/21

## ನಕಲಿ ಸಿಡಿ ಮಾಡಿದ್ದು 2+3+4 ಜನರು

ಬೆಂಗಳೂರು: ಸಿಡಿ ಪ್ರಕರಣದ ನಂತರ ಅಜ್ಞಾತವಾಗಿದ್ದ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರು, ಸಿಡಿ ತಯಾರಿಸಿದವರು ಮತ್ತು ಬಿಡುಗಡೆ ಮಾಡಿದವರ ವಿರುದ್ಧ ಕಾನೂನು ಸಮರ ನಡೆಸುವುದಾಗಿ ಹೇಳಿದ್ದು, ಷಡ್ಯಂತ್ರ ನಡೆಸಿದವರನ್ನು ಜೈಲಿಗೆ ಕಳುಹಿಸುವುದೇ ನನ್ನ ಗುರಿ ಎಂದು ಹೇಳಿದ್ದಾರೆ.



ತಮ್ಮ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಮ್ಮ ವಿರುದ್ಧ ಷಡ್ಯಂತ್ರ ನಡೆಸಿ ನಕಲಿ ಸಿಡಿ ತಯಾರು ಮಾಡಲಾಗಿದೆ. ಬೆಂಗಳೂರಿನಲ್ಲಿ ಎರಡು ಕಡೆ ಸಿಡಿ ತಯಾರಿಸಲು ಷಡ್ಯಂತ್ರ ಮಾಡಲಾಗಿದೆ. ಯಶವಂತಪುರ ಪೊಲೀಸ್ ಠಾಣೆಯ ಪಕ್ಕ ಅಪಾರ್ಟ್‌ಮೆಂಟ್‌ನ 4ನೇ ಮಹಡಿ ಹಾಗೂ ಒರಾಯನ್ ಮಾಲ್‌ನ ಐದನೇ ಮಹಡಿಯಲ್ಲಿ ಷಡ್ಯಂತ್ರ ಹೆಣೆಯಲಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿರುವಾಗ ಗದ್ಗದಿತರಾದ ರಮೇಶ್ ಜಾರಕಿಹೊಳಿ, ನನ್ನ ರಾಜಕೀಯ ಏಳಿಗೆ ಸಹಿಸದವರು ಈ ಷಡ್ಯಂತ್ರ ಮಾಡಿದ್ದಾರೆ. ಇದರಲ್ಲಿ 2+3+4 ಜನ ಇದ್ದಾರೆ. ನಾನು ಮುಂದೆ ರಾಜಕೀಯಕ್ಕೆ ಬರುತ್ತೇನೋ ಇಲ್ಲವೋ ಗೊತ್ತಿಲ್ಲ. ಆದರೆ, ನನ್ನ ಕುಟುಂಬದ ಗೌರವ ವಾಪಸ್ ಬರಬೇಕು. ಈ ಪ್ರಕರಣದಲ್ಲಿ ನನ್ನ ಸಹೋದರ ಬಾಲಚಂದ್ರ ಜಾರಕಿಹೊಳಿ ಹೇಳಿರುವುದಕ್ಕೆ ನಾನು ಬದ್ಧನಾಗಿದ್ದೇನೆ. ಅವರು ಯಾವ ತನಿಖೆಗೆ ಆಗ್ರಹಿಸುತ್ತಾರೆ, ಅದಕ್ಕೆ ಸಹಕಾರ ನೀಡುತ್ತೇನೆ ಎಂದು ಹೇಳಿದರು.

**ಹೈಕಮಾಂಡ್ ಸೂಚನೆ ನೀಡಿತ್ತು:** ಈ ಸಿಡಿ ನಾಲ್ಕು ತಿಂಗಳ ಹಿಂದೆಯೇ ಮಾಡಿರುವುದು. ಇದರ ಬಗ್ಗೆ ನನ್ನ ಸಹೋದರ ಬಾಲಚಂದ್ರ ಜಾರಕಿಹೊಳಿ ಅವರು ಎರಡು ಬಾರಿ ನೆಲಮಂಗಲ ಮಾಜಿ ಶಾಸಕ ನಾಗರಾಜ್ ಮೂಲಕ ನನಗೆ ಕೇಳಿದ್ದರು. ಆದರೆ, ನಾನು ಆ ರೀತಿಯ ಯಾವುದೇ ಕೆಲಸ ಮಾಡಿಲ್ಲ ಎಂದು ಹೇಳಿದ್ದೆ. ನಾನು ಹಲವು ದೇವಸ್ಥಾನಗಳಿಗೆ ಹೋಗಿದ್ದೇನೆ. ಈ ರೀತಿಯ ಕೆಲಸ ಮಾಡಿ ಚಾಮುಂಡಿ ದೇವಸ್ಥಾನಕ್ಕೆ ಹೋಗಲು ಆಗುತ್ತದೆಯೇ ? ಈ ರೀತಿಯ ಸಿಡಿ ಇರುವ ಬಗ್ಗೆ ನಮ್ಮ ಪಕ್ಷದ ಹೈಕಮಾಂಡ್ 26 ಗಂಟೆ ಮುಂಚೆಯೇ ನನಗೆ ಕರೆ ಮಾಡಿ ಮಾಹಿತಿ ನೀಡಿತ್ತು. ಅಲ್ಲದೇ, ಕಾನೂನು ಪ್ರಕಾರ ಹೋರಾಟ ಮಾಡೋಣ ಧೈರ್ಯವಾಗಿರು ಎಂದು ಧೈರ್ಯ ತುಂಬಿತ್ತು ಎಂದು ಹೇಳಿದರು. ಈ ರೀತಿಯ ಸಿಡಿ ಬಿಡುಗಡೆಯ ಬಗ್ಗೆ ಮೊದಲೇ ಮಾಹಿತಿ ಇದ್ದಾಗ ಕ್ರಮ ಕೈಗೊಳ್ಳುವಂತೆ ಕೆಲವರು ಹೇಳಿದರು. ಆದರೆ, ನಾನು ಯಾರ ವಿರುದ್ಧವೂ ಕ್ರಮ ಕೈಗೊಳ್ಳಲು ಮುಂದಾಗಿಲ್ಲ.

▶ 9ನೇ ಪುಟಕ್ಕೆ

### ಮಹಾ ಷಡ್ಯಂತ್ರ

ಇದೊಂದು ಮಹಾ ಷಡ್ಯಂತ್ರ. ಇದರ ಹಿಂದೆ ಯಾರಿದ್ದಾರೆ ಎಂದು ಗೊತ್ತಿದೆ. ಅವರ ಹೆಸರು ಗೊತ್ತಿದೆ, ಆದರೆ ಹೇಳುವುದಿಲ್ಲ ಎಂದು ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಇದು ಅತ್ಯಂತ ಸೂಕ್ಷ್ಮ ವಿಚಾರ ಎಂದಿದ್ದಾರೆ. ಈ ಪ್ರಕರಣದಲ್ಲಿ ಆ ಹೆಣ್ಣು ಮಗಳಿಗೆ 5 ಕೋಟಿ ಕೊಟ್ಟಿದ್ದಾರೆ. ಅವಳಿಗೆ ದುಬೈನಲ್ಲಿ ಫ್ಲಾಟ್ ಕೊಟ್ಟಿದ್ದಾರೆ. ಷಡ್ಯಂತ್ರ ಮಾಡಿದವರನ್ನು ಜೈಲಿಗೆ ಹಾಕಿಸುವುದೇ ನನ್ನ ಗುರಿ. ಅವರು ಎಷ್ಟೇ ದೊಡ್ಡ ಪ್ರಭಾವಿ ಇರಲಿ, ಎಷ್ಟೇ ಖರ್ಚಾಗಲಿ ಅವರನ್ನು ಜೈಲಿಗೆ ಹಾಕಿಸದೇ ಬಿಡುವುದಿಲ್ಲ ಎಂದು ಜಾರಕಿಹೊಳಿ ಎಚ್ಚರಿಕೆ ನೀಡಿದರು. ಇದೇ ವೇಳೆ ಪರೋಕ್ಷವಾಗಿ ಕೆಲವು ರಾಜಕಾರಣಿಗಳಿಗೆ ಜಾರಕಿಹೊಳಿ ಎಚ್ಚರಿಕೆ ನೀಡಿದರು. ಶೋಪೀಸ್‌ಗಳನ್ನು ಸುಮ್ಮನೆ ಬಿಡುವುದಿಲ್ಲ, ಮುಂದಿನ ಚುನಾವಣೆಯಲ್ಲಿ ಅವರು ಗೆಲ್ಲುವುದಿಲ್ಲ, ಉತ್ತರ ಕರ್ನಾಟಕ-ಹೈದರಾಬಾದ್ ಕರ್ನಾಟಕದವರು ಇಷ್ಟು ಕೀಳು ರಾಜಕಾರಣ ಮಾಡುವುದಿಲ್ಲ ಎಂದು ಖಡಾಖಂಡಿತವಾಗಿ ರಮೇಶ್ ಜಾರಕಿಹೊಳಿ ನುಡಿದರು.

## ಷಡ್ಯಂತ್ರ ಮಾಡಿದವರ ಜೈಲಿಗೆ ಕಳುಹಿಸುವೆ

10/3/21

1ನೇ ಪುಟದಿಂದ ▶ ಅಂದು ಬೆಳಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಮಾತನಾಡಿದ್ದೇನೆ. ನಾನು ರಾಜೀನಾಮೆ ನೀಡಿದರೆ ತಪ್ಪು ಒಪ್ಪಿಕೊಂಡಂತಾಗುತ್ತದೆ ಎನ್ನುವ ಕಾರಣಕ್ಕೆ ರಾಜೀನಾಮೆ ನೀಡುವುದಿಲ್ಲ ಎಂದು ಹೇಳಿದ್ದೆ. ನಾನು ಬಹಳ ದುಃಖದಲ್ಲಿದ್ದೇನೆ. ದಯವಿಟ್ಟು ನನಗೆ ಸಹಕಾರ ಕೊಡಿ ಎಂದು ಮನವಿ ಮಾಡಿದರು.

ಗೌಡರ ಕುಟುಂಬಕ್ಕೆ ಧನ್ಯವಾದ: ಈ ಪ್ರಕರಣದಲ್ಲಿ ದೇವೇಗೌಡರ ಕುಟುಂಬದವರು ನನಗೆ ಧೈರ್ಯ ತುಂಬಿದರು. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ, ರೇವಣ್ಣ ನನಗೆ ಧೈರ್ಯ ತುಂಬಿದರು. ನಾನು ಸರ್ಕಾರ ಕೆಡವಿದ್ದೇನೆ ಎಂದು ಅವರಿಗೆ ಅನಿಸಿದ್ದರೆ ಅವರೇಕೆ ನನಗೆ ಕರೆ ಮಾಡುತ್ತಿದ್ದರು ಎಂದು ಪ್ರಶ್ನಿಸಿದರು. ಈ ವಿಚಾರದಲ್ಲಿ ನನಗೆ ಎಲ್ಲ ಪಕ್ಷಗಳ ರಾಜಕೀಯ ನಾಯಕರು ಬೆಂಬಲವಾಗಿ ನಿಂತಿದ್ದಾರೆ. ಮುಖ್ಯಮಂತ್ರಿ ಯಡಿಯೂರಪ್ಪ ಕೂಡ ನನ್ನ ಬೆಂಬಲಕ್ಕೆ ನಿಂತಿದ್ದಾರೆ. ಈ ಪ್ರಕರಣವನ್ನು ಯಾವ ಸಂಸ್ಥೆಯಿಂದ ತನಿಖೆ ನಡೆಸಬೇಕೆಂದು ಮುಖ್ಯಮಂತ್ರಿಗಳು ನಿರ್ಧರಿಸುತ್ತಾರೆ ಎಂದು ಹೇಳಿದರು.